ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಶ್ರೀ ವಾಜಪೇಯಿ ಬಡಾವಣೆ ಅಭಿವೃದ್ಧಿ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

249 (226) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಜಿಲ್ಲೆಯ CDA ರವರಿಂದ ಬಿಹಾರಿ ವಾಜಪೇಯಿ ಬಡಾವಣೆ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಯಿತು ಹಾಗೂ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಕಾಮಗಾರಿ ಕೈಗೆತ್ತಿಕೊಳ್ಳುವ ಮುಂಚೆ ಸರಿಯಾದ ರೀತಿಯಲ್ಲಿ ಯೋಜನೆ ರೂಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕಾಮಗಾರಿ ವಿಳಂಬವಾಗಲು ಯಾರು ಹೊಣೆ ಹಾಗೂ ಅವರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ;

(ಉ) ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?